**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು ಇಲ್ಲಿನ ಬಿ.ಎ.ಎಂ.ಎಸ್. ಪದವಿ ಕೋರ್ಸಿನ ಪ್ರವೇಶ ಮಿತಿಯನ್ನು ಹೆಚ್ಚಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಆಯುಷ್ ನಿರ್ದೇಶಕರ ಪ್ರಸ್ತಾವನೆ ಸಂಖ್ಯೆ:ಆಯುಷ್/78/ವೈ.ಶಿ.(2)/2017-18, ದಿನಾಂಕ:26.10.2017.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ACA/AFF/AY-55/2017-18, ದಿನಾಂಕ:21.04.2016.
3. ಸರ್ಕಾರದ ಪತ್ರ ಸಂಖ್ಯೆ:ಆಕುಕ 111 ಪಿಟಿಡಿ 2016, ದಿನಾಂಕ:28.04.2016.
4. ಆಯುಷ್ ಮಂತ್ರಾಲಯದ ಪತ್ರ ಸಂಖ್ಯೆ:R.13011/22/2016-EP (IM-1), dated:13.10.2017.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯಲ್ಲಿ, ನಿರ್ದೇಶಕರು, ಆಯುಷ್ ಇಲಾಖೆ, ಬೆಂಗಳೂರು ಇವರು ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿನ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 2017-18ನೇ ಶೈಕ್ಷಣಿಕ ಸಾಲಿಗೆ 50 ರಿಂದ 100 ಕ್ಕೆ ಹೆಚ್ಚಿಸಿಕೊಳ್ಳಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಫಿಲಿಯೇಷನ್ ನೀಡಿದ್ದರ ಮೇರೆಗೆ ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಒದಗಿಸಲಾಗಿದ್ದು, ಪ್ರಸ್ತುತ ಕೇಂದ್ರ ಸರ್ಕಾರವು ಸದರಿ ಪ್ರವೇಶ ಮಿತಿ ಹಚ್ಚಳಕ್ಕೆ ಕೆಲವು ಷರತ್ತಿಗೊಳಪಟ್ಟು ಅನುಮತಿ ನೀಡಿರುತ್ತದೆ. ಆದುದರಿಂದ, 2017-18ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿಗೆ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 50 ರಿಂದ 100 ಕ್ಕೆ ಹೆಚ್ಚಿಸಿಕೊಳ್ಳಲು ಅಫಿಲಿಯೇಷನ್ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ಸರ್ಕಾರದ ಪತ್ರದೊಂದಿಗೆ, ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿಗೆ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 50 ರಿಂದ 100 ಸೀಟ್‌ಗಳಿಗೆ ಹೆಚ್ಚಿಸಲು ರಾಜ್ಯ ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ (4)ರ ಪತ್ರದಲ್ಲಿ, ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ

. . . 2

ಶೈಕ್ಷಣಿಕ ಸಾಲಿಗೆ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 50 ರಿಂದ 100 ಸೀಟ್‌ಗಳಿಗೆ ಹೆಚ್ಚಿಸಲು ಕೆಲವು ಷರತ್ತುಗಳಿಗೊಳಪಟ್ಟು ಅನುಮತಿ ನೀಡಿರುತ್ತದೆ.

ಆಯುಷ್ ನಿರ್ದೇಶಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 50 ರಿಂದ 100 ಸೀಟ್‌ಗಳಿಗೆ ಹೆಚ್ಚಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 313 ಪಿಟಿಡಿ 2017, ಬೆಂಗಳೂರು, ದಿನಾಂಕ:04.11.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕಕ್ಕೇಹಳ್ಳಿ ರಸ್ತೆ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 50 ರಿಂದ 100 ಸೀಟ್‌ಗಳಿಗೆ ಹೆಚ್ಚಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿ ಹೆಚ್ಚಿಸಲು ಭಾರತ ಸರ್ಕಾರ/ಸಿ.ಸಿ.ಐ.ಎಂ. ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಭಾರತ ಸರ್ಕಾರ/ಸಿ.ಸಿ.ಐ.ಎಂ. ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಕೇಂದ್ರ/ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರದ ಪೂರ್ವಾನುಮತಿಯಿಲ್ಲದೇ ಸಂಸ್ಥೆಯ ಹೆಸರು ಮತ್ತು ವಿಳಾಸವನ್ನು ಬದಲಾಯಿಸಬಾರದು.
8. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

**ಇವರಿಗೆ:**

1) Secretary to Government, Ministry of AYUSH, AYUSH Bhawan, B.Block, GPO Complex, New Delhi-110 023. (R.12011/06/2015-EP (IM-1).

2) ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-09.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ಪ್ರಾಚಾರ್ಯರು, ಆತ್ರೇಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಕೊಡಿಗೇಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.

<u>ಪ್ರತಿಗಳು:-</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.